ಭಾರತೀಯ ಜನತಾ ಪಾರ್ಟಿ–ಕರ್ನಾಟಕ
Bharatiya Janatha Party-Karnataka
# 48, "ಜಗನ್ನಾಥ ಭವನ", ದೇವಸ್ಥಾನದ ಬೀದಿ, 11ನೇ ಅಡ್ಡರಸ್ತೆ, ಮಲ್ಲೇಶ್ವರ, ಬೆಂಗಳೂರು–560003.
ದೂ.: 080–22041976, 23569999, ಫ್ಯಾಕ್ಸ್: 080–23460398

5–4–2025

ಗೆ,

ಸಂಪಾದಕರು / ವರದಿಗಾರರು.

ಪ್ರಕಟಣೆಯ ಕೃಪೆಗಾಗಿ

# ವಿಜಯೇಂದ್ರ, ಮುಖಂಡರು, ಕಾರ್ಯಕರ್ತರ ಬಂಧನ

ಕುಶಾಲನಗರ: ಬಿಜೆಪಿಯ ಸಕ್ರಿಯ ಕಾರ್ಯಕರ್ತ ವಿನಯ್ ಸೋಮಯ್ಯ ಅವರ ಆತ್ಮಹತ್ಯೆ ಪ್ರಕರಣದಲ್ಲಿ ಕಾಂಗ್ರೆಸ್ಸಿನ ಇಬ್ಬರು ಶಾಸಕರ ಹೆಸರು ಎಫ್‌ಐಆರ್‌ನಲ್ಲಿ ಉಲ್ಲೇಖಿಸುವಂತೆ ಆಗ್ರಹಿಸಿ ಪ್ರತಿಭಟನೆ ನಡೆಸಿದ ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಮತ್ತು ಇತರ ಪ್ರಮುಖರನ್ನು ಪೊಲೀಸರು ಬಂಧಿಸಿದ್ದಾರೆ.

ಬಿಜೆಪಿ ಪ್ರಮುಖರು ಮತ್ತು ಕಾರ್ಯಕರ್ತರು ಕುಶಾಲನಗರ ಪೊಲೀಸ್ ಠಾಣೆ ಮುಂದೆ ಪ್ರತಿಭಟನೆಗೆ ಮುಂದಾಗಿದ್ದರು. ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ವಡೆಯರ್, ಮಾಜಿ ಸಂಸದ ಪ್ರತಾಪ್ ಸಿಂಹ, ಮಾಜಿ ಸಚಿವ ಕೆ.ಜಿ.ಬೋಪಯ್ಯ ಹಾಗೂ ಕಾರ್ಯಕರ್ತರನ್ನು ಪೊಲೀಸರು ವಶಕ್ಕೆ ಪಡೆದರು.

ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರೀತಂ ಗೌಡ, ರಾಜ್ಯ ಉಪಾಧ್ಯಕ್ಷ ಎಲ್. ನಾಗೇಂದ್ರ, ವಿಧಾನ ಪರಿಷತ್ ವಿಪಕ್ಷದ ಮುಖ್ಯ ಸಚೇತಕ ಎನ್.ರವಿಕುಮಾರ್, ಮೈಸೂರಿನ ಶಾಸಕ ಶ್ರೀವತ್ಸ, ಮೈಸೂರಿನ ಮಾಜಿ ಶಾಸಕ ಎಲ್.ನಾಗೇಂದ್ರ, ಬಿಜೆಪಿ ಕೊಡಗು ಜಿಲ್ಲಾಧ್ಯಕ್ಷ ರವಿ ಕಾಳಪ್ಪ, ಮಾಜಿ

ಅಧ್ಯಕ್ಷರಾದ ರಾಬಿನ್ ದೇವಯ್ಯ, ಭಾರತೀಶ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಹೇಶ್ ದೇಣಿ, ಮೊದಲಾದವರು ಭಾಗವಹಿಸಿದ್ದರು ಹಾಗೂ ಅವರನ್ನು ಪೊಲೀಸರು ವಶಕ್ಕೆ ಪಡೆದರು.

(ಕರುಣಾಕರ ಖಾಸಲೆ)

ಮಾಧ್ಯಮ ಸಂಚಾಲಕರು

ಬಿಜೆಪಿ ಕರ್ನಾಟಕ

ರಾಜ್ಯದಲ್ಲಿ ಬೆಲೆ ಏರಿಕೆ ಗ್ಯಾರಂಟಿ ಕೊಡುವ ಕಾಂಗ್ರೆಸ್ ಪಕ್ಷದ ಸರಕಾರ ಅಧಿಕಾರದಲ್ಲಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ಅವರು ಟೀಕಿಸಿದ್ದಾರೆ.

ಕಾಂಗ್ರೆಸ್ ಸರ್ಕಾರದ ಬೆಲೆ ಏರಿಕೆ ನೀತಿಯನ್ನು ವಿರೋಧಿಸಿ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಇಂದು ಬಿಜೆಪಿಯ ಅಹೋರಾತ್ರಿ ಧರಣಿಯ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು. ನುಡಿದಂತೆ ನಡೆದ ಸರಕಾರ ಎಂದು ಜಾಹೀರಾತು ನೀಡುತ್ತಿದ್ದಾರೆ. ಇದು ಮನುಷ್ಯತ್ವ ಇರುವ ಸರಕಾರ ಅಲ್ಲ; ಕೇವಲ 24 ಗಂಟೆಗಳಲ್ಲಿ ಗ್ಯಾರಂಟಿ ಅನುಷ್ಠಾನ ಮಾಡುವುದಾಗಿ ಹೇಳಿದ್ದರು. ಆದರೆ, ತಿಂಗಳುಗಳೇ ಕಳೆದರೂ ಗ್ಯಾರಂಟಿಗಳು ಅನುಷ್ಠಾನ ಆಗಿಲ್ಲ ಎಂದು ಆಕ್ಷೇಪಿಸಿದರು.

# 48, "JAGANNATHA BHAVAN", Temple Street, 11th Cross, Malleshwara, Bengaluru-560003.
Phone: 080-22041976, 23569999, Fax: 080-23460398
e-mail: bjponline@gmail.com, web: www.bjpkarnataka.org

**ಕುರ್ಚಿಯ ಅಭದ್ರತೆ ಕಾಡುತ್ತಿದ್ದರೆ..**

ಮುಖ್ಯಮಂತ್ರಿಗಳೇ ದಯವಿಟ್ಟು ನಿಮ್ಮ ಎ.ಸಿ. ರೂಮಿನಿಂದ ಹೊರಕ್ಕೆ ಬನ್ನಿ. ನೀವು ಬೆಂಗಳೂರಿನ ಸಿಎಂ ಅಲ್ಲ; ರಾಯಚೂರು, ಕೊಪ್ಪಳ, ಬೆಳಗಾವಿ ಸೇರಿ ಎಲ್ಲ ಜಿಲ್ಲೆಗಳಿಗೆ ಸಚಿವರ ಜೊತೆ ಪ್ರವಾಸ ಮಾಡಿ ಎಂದು ವಿಜಯೇಂದ್ರ ಅವರು ಆಗ್ರಹಿಸಿದರು.

ಸಿದ್ದರಾಮಯ್ಯನವರೇ, ಹಿಂದೆ ರಾಜ ಮಹಾರಾಜರು ಮಾರುವೇಷದಲ್ಲಿ ತೆರಳಿ ಪ್ರಜೆಗಳ ಯೋಗಕ್ಷೇಮ ವಿಚಾರಿಸುತ್ತಿದ್ದರು. ಬಳಿಕ ಜನರಿಗೆ ಅನುಕೂಲ ಆಗುವ ಯೋಜನೆ ಜಾರಿಗೊಳಿಸುತ್ತಿದ್ದರು. ಮಹಾರಾಜರ ಸ್ಥಾನದಲ್ಲಿರುವ ನೀವು ಕುರ್ಚಿಯ ಅಭದ್ರತೆ ಕಾಡುತ್ತಿದ್ದರೆ ಡಿ.ಕೆ.ಶಿವಕುಮಾರರನ್ನೂ ಜೊತೆಗೇ ಕರೆದುಕೊಂಡು ಹೋಗಿ ಎಂದು ವ್ಯಂಗ್ಯವಾಗಿ ತಿಳಿಸಿದರು. ಬಿತ್ತನೆ ಬೀಜದ ದರ ಹೆಚ್ಚಾಗಿದೆ. ಕಳೆದ 20 ತಿಂಗಳ ಆಡಳಿತದಲ್ಲಿ ಜನರು ಖುಷಿ ಆಗಿದ್ದಾರಾ ಎಂಬ ಬಗ್ಗೆ ಅರಿತುಕೊಳ್ಳಲು ರಾಜ್ಯ ಪ್ರವಾಸ ಮಾಡಿ ಎಂದು ಆಗ್ರಹಿಸಿದರು.

ಮಹಿಳೆಯರಿಗೆ 2 ಸಾವಿರ, ಪುಕ್ಕಟೆ ವಿದ್ಯುತ್ ಸೇರಿ ವಿವಿಧ ಯೋಜನೆಗಳ ಕುರಿತು ಭಾಷಣ ಮಾಡುತ್ತಾರೆ. ಆದರೆ, ಅವುಗಳು ಸರಿಯಾಗಿ ಅನುಷ್ಠಾನ ಆಗಿಲ್ಲ ಎಂದು ದೂರಿದರು. ಇದು ಜನರ ಮೇಲೆ ಬೆಲೆ ಏರಿಕೆಯ ಬರೆ ಎಳೆಯುವ ಸರಕಾರ ಎಂದು ಆರೋಪಿಸಿದರು.

ಬಡವರು, ರೈತರು, ಜನಸಾಮಾನ್ಯರು ಇವತ್ತು ನೆಮ್ಮದಿಯಿಂದ ಬದುಕಲು ಸಾಧ್ಯವಿಲ್ಲದ ದುಸ್ಥಿತಿ ಬಂದಿದೆ. ಪೆಟ್ರೋಲ್, ಡೀಸೆಲ್, ಹಾಲಿನ ದರ, ಸರಕಾರಿ ಆಸ್ಪತ್ರೆಗಳ ಶುಲ್ಕ ಹೆಚ್ಚಿಸಿದ್ದಾರೆ ಎಂದು ಟೀಕಿಸಿದರು. ನಿನ್ನೆಯಷ್ಟೇ ಡೀಸೆಲ್ ಬೆಲೆ 2 ರೂ. ಹೆಚ್ಚಿಸಿದ್ದಾರೆ ಎಂದು ಟೀಕಿಸಿದರು. ಇದರಿಂದ ಸರಕುಗಳ ದರವೂ ಹೆಚ್ಚಾಗಲಿದೆ ಎಂದು ತಿಳಿಸಿದರು.

**ಏಪ್ರಿಲ್ 7ರಿಂದ ಜನಾಕ್ರೋಶ ಯಾತ್ರೆ**

ಏಪ್ರಿಲ್ 7ರಿಂದ ಜನಾಕ್ರೋಶ ಯಾತ್ರೆ ಪ್ರಾರಂಭಿಸುತ್ತೇವೆ. ಕೇಂದ್ರದ ಸಚಿವ ಪ್ರಲ್ಹಾದ

ಜೋಶಿಯವರು ಉದ್ಘಾಟಿಸುತ್ತಾರೆ ಎಂದು ವಿಜಯೇಂದ್ರ ಅವರು ತಿಳಿಸಿದರು.

ಭ್ರಷ್ಟ ಕಾಂಗ್ರೆಸ್ ಸರಕಾರದ ಬೆಲೆ ಏರಿಕೆಯ ವಿರುದ್ಧ ಭಾರತೀಯ ಜನತಾ ಪಾರ್ಟಿ ಹಮ್ಮಿಕೊಂಡಿರುವ ಹೋರಾಟ ಇದು ಎಂದು ವಿವರಿಸಿದರು. ಕಾಂಗ್ರೆಸ್ ಸರಕಾರವು ಅಧಿಕಾರಕ್ಕೆ ಬರುವ ಮೊದಲು ಸಾಕಷ್ಟು ಭರವಸೆಗಳನ್ನು ನಾಡಿನ ಜನತೆಗೆ ನೀಡಿತ್ತು. ಜನರ ಕಣ್ಣಿಗೆ ಮಣ್ಣೆರಚಿ ಈ ಸರಕಾರ ಅಧಿಕಾರಕ್ಕೆ ಬಂದಿದೆ ಎಂದು ಟೀಕಿಸಿದರು.

ರಾಜ್ಯ ಸಹ ಉಸ್ತುವಾರಿ ಸುಧಾಕರ ರೆಡ್ಡಿ ಅವರು ಮಾತನಾಡಿ, ಇಲ್ಲಿನದು ಭ್ರಷ್ಟರ ಸರಕಾರ ಎಂದು ಟೀಕಿಸಿದರು. ಇದು ಭ್ರಷ್ಟಾಚಾರದ ಗ್ಯಾರಂಟಿ ನೀಡುವ ಸರಕಾರ ಎಂದು ಆಕ್ಷೇಪಿಸಿದರು.

ಕರ್ನಾಟಕದಲ್ಲಿ ಬಿಜೆಪಿಯ ಸರಕಾರ ಮುಂದಿನ ದಿನಗಳಲ್ಲಿ ಬರಲಿದೆ. ನಮ್ಮ ಮೇಲೆ ಶೇ 40 ಕಮಿಷನ್‌ನ ಸುಳ್ಳು ಆರೋಪ ಮಾಡಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ತಮ್ಮ ಸುಳ್ಳು ಆರೋಪಕ್ಕಾಗಿ ರಾಜೀನಾಮೆ ಕೊಡಬೇಕು ಎಂದು ಆಗ್ರಹಿಸಿದರು. ಕೇಂದ್ರದ ಬಿಜೆಪಿ ಸರಕಾರವು ಡಾ. ಅಂಬೇಡ್ಕರ್ ಅವರಿಗೆ ಮತ್ತು ಅವರ ಸಂವಿಧಾನಕ್ಕೆ ಗೌರವ ಕೊಡುವ ಕೆಲಸ ಮಾಡುತ್ತಿದೆ ಎಂದು ಮೆಚ್ಚುಗೆ ಸೂಚಿಸಿದರು.

ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರು ಮಾತನಾಡಿ, ಸಿದ್ದರಾಮಯ್ಯ ಹೆಸರಿಗಷ್ಟೇ ಮುಖ್ಯಮಂತ್ರಿ. ಅವರೀಗ ನಿದ್ದೆರಾಮಯ್ಯ ಆಗಿದ್ದಾರೆ. ಮನೆಹಾಳ ಸಿದ್ದರಾಮಯ್ಯ ಎಂದು ಜನರು ಟೀಕಿಸುತ್ತಿದ್ದಾರೆ. ಕರ್ನಾಟಕದ ಜನರ ಪಾಲಿಗೆ ಈ ಕಾಂಗ್ರೆಸ್ ಸರಕಾರ ಸತ್ತು ಹೋಗಿದೆ ಎಂದು ಆರೋಪಿಸಿದರು.

ಈ ಸಂದರ್ಭದಲ್ಲಿ ಮಾಜಿ ಮುಖ್ಯಮಂತ್ರಿ ಮತ್ತು ಕೇಂದ್ರೀಯ ಸಂಸದೀಯ ಮಂಡಳಿ ಸದಸ್ಯ ಬಿ.ಎಸ್.ಯಡಿಯೂರಪ್ಪ, ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಹಿರಿಯ ಮುಖಂಡ ಸಿ.ಟಿ.ರವಿ, ಮಾಜಿ ಡಿಸಿಎಂ ಡಾ.ಅಶ್ವತ್ಥನಾರಾಯಣ್, ಎಲ್ಲಾ ಮಾಜಿ ಸಚಿವರು, ಶಾಸಕರು ಹಾಗೂ ವಿಧಾನ ಪರಿಷತ್ತಿನ ಸದಸ್ಯರು, ಪರಾಜಿತ ಅಭ್ಯರ್ಥಿಗಳು, ರಾಜ್ಯದ ಎಲ್ಲಾ ಜಿಲ್ಲಾಧ್ಯಕ್ಷರು, ಮೋರ್ಚಾ, ಪ್ರಕೋಷ್ಠಗಳ ಸಂಚಾಲಕರು, ಸಹ ಸಂಚಾಲಕರು ಹಾಗೂ ಪ್ರಮುಖ ಕಾರ್ಯಕರ್ತರು ಭಾಗವಹಿಸಿದ್ದರು.